## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Ecoren Energy India Private Limited ರವರಿಗೆ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ದಿನಾಂಕ:11.09.2018 ರ ಹಂಚಿಕೆ ಸಮಿತಿ ಸಭೆ.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KREDL/08/EEIPL-5 MW/ Nimbalagiri/Ballari/F-1748/2021/2389, ದಿನಾಂಕ:13.08.2021

1581
30/9/21

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ (1)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Ecoren Energy India Private Limited ರವರಿಗೆ ಬಳ್ಳಾರಿ ಜಿಲ್ಲೆಯ, ಕೂಡ್ಲಿಗಿ ತಾಲ್ಲೂಕಿನ ನಿಂಬಲಗಿರಿ ಮತ್ತು ಮಂಗಾಲಾಪುರ್ಗ್ರಾಮಗಳಲ್ಲಿ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿಯಲ್ಲಿ ಹಂಚಿಕೆ ನೀಡುವಂತೆ ಕೋರಿರುವ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳವು ಅರಣ್ಯ ಮತ್ತು ಖಾಸಗಿ ಜಮೀನುಗಳಾಗಿದ್ದು, ಸದರಿ ಸ್ಥಳದಲ್ಲಿ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ 5 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಲಾಗಿತ್ತು.

ಮೇಲೆ ಓದಲಾದ ಕ್ರ.ಸಂ.(2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Ecoren Energy India Private Limited ರವರು ಬಳ್ಳಾರಿ ಜಿಲ್ಲೆಯ, ಕೂಡ್ಲಿಗಿ ತಾಲ್ಲೂಕಿನ ನಿಂಬಲಗಿರಿ ಮತ್ತು ಮಂಗಾಲಾಪುರ್ ಗ್ರಾಮಗಳಲ್ಲಿ 5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ. ಕ್ರೆಡಲ್ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮೂರನೇ ವ್ಯಕ್ತಿಗೆ ವೀಲಿಂಗ್ ಮುಖಾಂತರ ಮಾರಾಟ ಮಾಡುವ ಪ್ರಸ್ತಾವನೆಯನ್ನು ಪರಿಶೀಲಿಸಿ, ದಿನಾಂಕ: 11.09.2018 ರ ಹಂಚಿಕೆ ಸಮಿತಿಯು ಅನುಮೋದಿಸಿರುವಂತೆ ಹಂಚಿಕೆ ಆದೇಶ ಹೊರಡಿಸುವ ಕುರಿತು ತಾಂತ್ರಿಕ ಮಾಹಿತಿಯನ್ನು ಒಳಗೊಂಡ ಪ್ರಸ್ತಾವನೆಯನ್ನು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

**Geographical area description for 5 MW capacity Wind Power Project of M/s Ecoren Energy India Private Limited**

| Sl. No | Topo sheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 2 | 3 | 4 | 5 |
| 1 | 57 B/6 | 5 MW (10 Nos x 500 kW) | Nimbalgiri and Mangapura villages of Kudligi taluk, Bellary district | In the villages of Column No.(4), it is proposed to implement the wind power project by the developer. **Peaks:** 650, 643 and 641 m AMSL |
| | **Total** | **5 MW** | | |

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ದಿನಾಂಕ: 07.09.2021 ರ ಆದೇಶದಲ್ಲಿ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಬ್ಯಾಂಕಿಂಗ್ ಸೌಲಭ್ಯವನ್ನು ಒಂದು ವರ್ಷದ ಅವಧಿಗೆ ನೀಡುವ ವಿಷಯದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 1061/2019 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪಿಲ್ ಸಂಖ್ಯೆ: 9619-9637/2019 ರಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ಆದೇಶಗಳಗೊಳಪಟ್ಟು ಬ್ಯಾಂಕಿಂಗ್ ಸೌಲಭ್ಯವನ್ನು ದಿನಾಂಕ: 31.03.2022 ರವರೆಗೆ ವಿಸ್ತರಿಸಿ ಆದೇಶಿಸಿರುತ್ತದೆ.

Wind Section
444
1/10/21

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ 186 ಎನ್‌ಸಿಇ 2021</u>**

**<u>ಬೆಂಗಳೂರು, ದಿನಾಂಕ:27/09/2021</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Ecoren Energy India Private Limited ರವರಿಗೆ ಬಳ್ಳಾರಿ ಜಿಲ್ಲೆಯ, ಕೂಡ್ಲಿಗಿ ತಾಲ್ಲೂಕಿನ ನಿಂಬಲಗಿರಿ ಮತ್ತು ಮಂಗಾಲಾಪುರ್ ಗ್ರಾಮಗಳಲ್ಲಿ 5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತು ಹಾಗೂ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಿ ಆದೇಶಿಸಿದೆ.

**Geographical area description for 5 MW capacity Wind Power Project of M/s Ecoren Energy India Private Limited**

| Sl. No | Topo sheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| **1** | **2** | **3** | **4** | **5** |
| 1 | 57 B/6 | 5 MW (10 Nos x 500 kW) | Nimbalgiri and Mangapura villages of Kudligi taluk, Bellary district | In the villages of Column No.(4), it is proposed to implement the wind power project by the developer. **Peaks:** 650, 643 and 641 m AMSL |
| | **Total** | **5 MW** | | |

**<u>ಷರತ್ತುಗಳು:</u>**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಎನ್ 435 ಎನ್‌ಸಿಇ 2011, ದಿನಾಂಕ :06.01.2012ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಇಎನ್ 354 ಎನ್‌ಸಿಇ 2008, ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ:ಇಎನ್ 07 ಎನ್‌ಸಿಇ 2011, ದಿನಾಂಕ:18.07.2011ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನ ಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಸ್ಪಷ್ಟ ನಕ್ಷೆಯನ್ನು ತಯಾರಿಸಿ, ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದಲ್ಲಿ; ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಸ್ವಂತ ಬಳಕೆ/ ಮೂರನೇ ವ್ಯಕ್ತಿಗೆ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.
7. ಬ್ಯಾಂಕಿಂಗ್ ಸೌಲಭ್ಯದ ಅವಧಿಯು ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 1061/2019 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪಿಲ್ ಸಂಖ್ಯೆ: 9619-9637/2019ರಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ಆದೇಶಕ್ಕೊಳಪಟ್ಟಿರುತ್ತದೆ.